Akashvani : Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

31.01.2025 14.30 hrs

<><*<><>*><>

ಮುಖ್ಯಾಂಶಗಳು

- ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ಕಾನೂನುಬಾಹಿರ ಸಾಲ ವಸೂಲಾತಿ ತಡೆಗೆ ಶೀಘ್ರ ಸುಗ್ರೀವಾಜ್ಞೆ ಜಾರಿಗೆ
- ರಾಜ್ಯದಲ್ಲಿ ೨ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ ಅಭಿವೃದ್ಧಿ
- ಬಜೆಟ್ ಅಧಿವೇಶನ ಆರಂಭ; ಸಂಸತ್ತಿನ ಜಂಟಿ ಅಧಿವೇಶನ ಉದ್ದೇಶಿಸಿ ರಾಷ್ಟ್ರಪತಿ ಭಾಷಣ; ನಾಳೆ ಕೇಂದ್ರ ಬಜೆಟ್ ಮಂಡನೆ
- ಎಲ್ಲ ಕೃಷಿ ಉತ್ಪನ್ನಗಳಿಗೆ ಎಂಎಸ್‌ಪಿ ಕಾನೂನು ಜಾರಿಗೆ ರಾಜ್ಯ ರೈತ ಸಂಘಟನೆಗಳ ಮನವಿ

<><*<><>*><>

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ಕಾನೂನುಬಾಹಿರ ಸಾಲ ವಸೂಲಾತಿ ತಡೆಗೆ ಸುಗ್ರೀವಾಜ್ಞೆ ಹೊರಡಿಸಿದ ಬಳಿಕ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಆರ್ ಬಿಐ ನಿಯಾಮಾವಳಿ ಉಲ್ಲಂಘಿಸಿ, ಜನರಿಂದ ಬಲವಂತವಾಗಿ ಸಾಲ ವಸೂಲಿ ಮಾಡುವ ಫೈನಾನ್ಸ್ ಸಂಸ್ಥೆಗಳಿಗೆ ಕಡಿವಾಣ ಹಾಕಲು ಸುಗ್ರೀವಾಜ್ಞೆ ಹೊರಡಿಸಲಾಗುತ್ತಿದೆ ಎಂದರು. ಜನರು ಯಾವುದೇ ಒತ್ತಡಕ್ಕೆ ಮಣಿಯದೇ ಜೀವಕ್ಕೆ ಎರವಾಗುವ ಯಾವುದೇ ಕ್ರಮ ಕೈಗೊಳ್ಳಬಾರದು ಎಂದು ಮುಖ್ಯಮಂತ್ರಿ ಮನವಿ ಮಾಡಿದರು.

(ಧ್ವನಿ- ಮುಖ್ಯಮಂತ್ರಿ ಸಿದ್ದರಾಮಯ್ಯ)

<><*<><>*><>

ರಾಜ್ಯದಲ್ಲಿ ೨ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ ಅಭಿವೃದ್ಧಿ ಪಡಿಸಲಾಗುವುದು ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಪಿಎಸ್ ಶಾಲೆಗೆ ಏಶಿಯನ್ ಅಭಿವೃದ್ಧಿ ಬ್ಯಾಂಕ್ ೨ ಸಾವಿರ ಕೋಟಿ ಬಿಡುಗಡೆಗೆ ಒಪ್ಪಿಗೆ ನೀಡಿದ್ದು, ಉಳಿದ ೫೦೦ ಕೋಟಿ ರೂಪಾಯಿಯನ್ನು ರಾಜ್ಯ ಸರ್ಕಾರ ಭರಿಸಲಿದೆ. ಇದರೊಂದಿಗೆ ೫೦೦ ರಿಂದ ೬೦೦ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದರು. ಶಿಕ್ಷಣದಲ್ಲಿ ಎಐ ತಾಂತ್ರಿಕತೆಯನ್ನು ಅಳವಡಿಸಲಾಗುವುದು, ಮಕ್ಕಳ ದೈಹಿಕ ಭಾಷೆ ಸರಿ ಮಾಡಲು ಎಐ ತಂತ್ರಜ್ಞಾನ ಬಳಸಿಕೊಳ್ಳಲಿದ್ದೇವೆ. ಎಲ್ ಕೆ ಜಿ ಯುಕೆಜಿ ಗೆ ಚಿಲಿಪಿಲಿ ಯೋಜನೆಯಡಿ ಶಿಕ್ಷಣ ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

****ಧ್ವನಿ**** ಮಧು ಬಂಗಾರಪ್ಪ

<><*<><>*><>

ಬಡವರು ಮಹಿಳೆಯರು ಮತ್ತು ರೈತರ ಅಭಿವೃದ್ಧಿಗೆ ತಮ್ಮ ಸರ್ಕಾರ ಬದ್ಧವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ಸಂಸತ್ತಿನ ಬಜೆಟ್ ಅಧಿವೇಶನದ ಆರಂಭದ ಮೊದಲ ದಿನವಾದ ಇಂದು ಸಂಸತ್ತಿನ ಉಭಯ ಸದನಗಳ ಜಂಟಿ ಅಧಿವೇಶನ ಉದ್ದೇಶಿಸಿ ಇಂದು ಭಾಷಣ ಮಾಡಿದ ರಾಷ್ಟ್ರಪತಿ, ಸಬ್ ಕಾ ಸಾತ್, ಸಬ್ ಕಾ ವಿಕಾಸ್ ಮಂತ್ರದಲ್ಲಿ ಸರ್ಕಾರಕ್ಕೆ ಸಂಪೂರ್ಣ ವಿಶ್ವಾಸವಿದ್ದು, ದೇಶದ ಸರ್ವಾಂಗೀಣ ಅಭಿವೃದ್ಧಿ ಹಾಗೂ ಜನರ ಕಲ್ಯಾಣಕ್ಕೆ ಹತ್ತು ಹಲವು ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದರು. ಸರ್ಕಾರ ಆರೋಗ್ಯ ಮತ್ತು ಶಿಕ್ಷಣಕ್ಕೆ ಒತ್ತು ನೀಡಿದೆ. ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಆದ್ಯತೆ ನೀಡಿದೆ. ಒಂದು ದೇಶ ಒಂದು ಚುನಾವಣೆ ಮತ್ತು ವಕ್ಫ್ ತಿದ್ದುಪಡಿ ಮಸೂದೆ ಜಾರಿಗೆ ಸರ್ಕಾರ ಈಗಾಗಲೇ ಕ್ರಮ ಕೈಗೊಂಡಿದೆ ಎಂದು ಅವರು ಹೇಳಿದರು. ಮಧ್ಯಮ ವರ್ಗದವರ ಆಶೋತ್ತರಗಳನ್ನು ಈಡೇರಿಸಲು ಸರ್ಕಾರ ಬದ್ಧವಾಗಿದ್ದು, ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಈಗಾಗಲೇ ಮೂರು ಕೋಟಿ ಪಕ್ಕಾ ಮನೆಗಳನ್ನು ನಿರ್ಮಿಸಲು ಕಾರ್ಯಯೋಜನೆ ರೂಪಿಸಲಾಗಿದೆ. ಮೂರು ಕೋಟಿ ಮಹಿಳೆಯರನ್ನು ಲಕ್‌ಪತಿ ದೀದಿಗಳನ್ನಾಗಿ ಪರಿವರ್ತಿಸಲು ಸರ್ಕಾರ ಮುಂದಾಗಿದೆ ಎಂದರು. ದೇಶದ ಎರಡು ಕೋಟಿ ೨೫ ಲಕ್ಷ ಜನರಿಗೆ ಜನಸ್ವಾಮಿತ್ವ ಕಾರ್ಡ್‌ಗಳನ್ನು ವಿತರಣೆ ಮಾಡಲಾಗಿದೆ. ಆಯುಷ್ಮಾನ್ ಭಾರತ್ ಯೋಜನೆಯಡಿ ೭೦ ವರ್ಷ ತುಂಬಿದ ೬ ಕೋಟಿ ಹಿರಿಯ ಜೀವಗಳಿಗೆ ಆರೋಗ್ಯ ವಿಮೆ ಒದಗಿಸಲು ಸರ್ಕಾರ ನಿರ್ಧರಿಸಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದರು. ಬುಡಕಟ್ಟು ಸಮುದಾಯದ ಐದು ಕೋಟಿ ಜನರಿಗೆ ದಾರ್ತಿ ಅಬಾ ಜನ್‌ಜಾತೀಯ ಗ್ರಾಮ ಉತ್ಕರ್ಷ್ ಅಭಿಯಾನವನ್ನು ಸರ್ಕಾರ ಆರಂಭಿಸಿದ್ದು, ಈ ಸಮುದಾಯದ ಅಭಿವೃದ್ಧಿಗೆ ವಿಶೇಷ ಒತ್ತು ನೀಡುತ್ತಿದೆ ಎಂದು ಹೇಳಿದರು.

<><*<><>*><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನಾಳೆ ಮಂಡಿಸಲಿರುವ ಕೇಂದ್ರ ಬಜೆಟ್ ೨೦೨೫ರಲ್ಲಿ ಎಲ್ಲ ಕೃಷಿ ಉತ್ಪನ್ನಗಳಿಗೂ ಕನಿಷ್ಠ ಬೆಂಬಲ ಬೆಲೆ ಶಾಸನ ಬದ್ಧ ಖಾತ್ರಿ ಕಾನೂನು ಜಾರಿ ಆಗಬೇಕು ಎಂದು ರಾಜ್ಯದ ರೈತ ಸಂಘಟನೆಗಳು ಒತ್ತಾಯಿಸಿವೆ. ಎಲ್ಲಾ ಬೆಳೆಗಳಿಗೂ ಬೆಳೆ ವಿಮೆ ಜಾರಿಯಾಗಬೇಕು. ಪ್ರಕೃತಿ ವಿಕೋಪದಿಂದಾಗುವ ಬೆಳೆನಷ್ಟಕ್ಕೆ ವಿಮೆ ಪರಿಹಾರ ಸಿಗಬೇಕು. ಕೃಷಿಗೆ ಬಳಸುವ ಕೀಟನಾಶಕ ರಸಗೊಬ್ಬರ, ಹನಿ ನೀರಾವರಿ ಉಪಕರಣಗಳು ಟ್ರ್ಯಾಕ್ಟರ್ ಬಿಡಿಭಾಗಗಳ ಜಿಎಸ್‌ಟಿ ತೆರಿಗೆ ರದ್ದುಗೊಳಿಸಬೇಕು ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಒತ್ತಾಯಿಸಿದ್ದಾರೆ. ಕಳಪೆ ಬಿತ್ತನೆ ಬೀಜ, ರಾಸಾಯನಿಕ ಗೊಬ್ಬರ, ನರ್ಸರಿ ಸಸಿಗಳು, ಕೀಟನಾಶಕ ಮಾರಾಟ ಮಾಡುವವರಿಗೆ ಜಾಮೀನು ರಹಿತ ಕಠಿಣ ಜೈಲು ಶಿಕ್ಷೆ ವಿಧಿಸುವ ಕಾನೂನು ಜಾರಿ ಮಾಡಬೇಕು ಎಂದು ಅವರು ಹೇಳಿದ್ದಾರೆ.

<><*<><>*><>

೨೦೨೫-೨೬ನೇ ಸಾಲಿನ ಕೇಂದ್ರ ಬಜೆಟ್ ನಾಳೆ ಮಂಡನೆಯಾಗಲಿದೆ. ಕೇಂದ್ರ ಬಜೆಟ್ ಮಂಡನೆಯ ಕಾರ್ಯಕಲಾಪವನ್ನು ಕರ್ನಾಟಕದಲ್ಲಿನ ಎಲ್ಲಾ ಆಕಾಶವಾಣಿ ಕೇಂದ್ರಗಳು ನೇರಪ್ರಸಾರ ಮಾಡಲಿವೆ. ಈ ಹಿನ್ನೆಲೆಯಲ್ಲಿ ನಾಳೆ ಮಧ್ಯಾಹ್ನದ ರಾಷ್ಟ್ರೀಯ ವಾರ್ತೆಗಳು ೧.೧೦ರ ಬದಲಾಗಿ ೧.೫೦ಕ್ಕೆ ಪ್ರಸಾರವಾಗಲಿದೆ. ಅದೇ ರೀತಿ ಮಧ್ಯಾಹ್ನ ೨.೩೦ರ ರಿಂದ ೨.೪೦ರವರೆಗೆ ಪ್ರಸಾರವಾಗುತ್ತಿದ್ದ ಪ್ರದೇಶ ಸಮಾಚಾರದ ಅವಧಿಯನ್ನು ಐದು ನಿಮಿಷಗಳ ಕಾಲ ವಿಸ್ತರಣೆ ಮಾಡಿ ೨.೩೦ ರಿಂದ ೨.೪೫ರವರೆಗೆ ಪ್ರಸಾರವಾಗಲಿದೆ. ಆಕಾಶವಾಣಿ ಬೆಂಗಳೂರು ಪ್ರಾದೇಶಿಕ ಸುದ್ದಿ ವಿಭಾಗದಿಂದ ನಾಳೆ ರಾತ್ರಿ ೭.೪೫ ರಿಂದ ೮.೪೫ರ ವರೆಗೆ ಕೇಂದ್ರ ಬಜೆಟ್ ಕುರಿತ ನೇರ ಚರ್ಚೆ ಮೂಡಿಬರಲಿದೆ.

<><*<><>*><>

ಭವಿಷ್ಯದ ದೃಷ್ಟಿಯಿಂದ ಬೆಂಗಳೂರಿಗೆ ಅತ್ಯಾವಶ್ಯಕವಾಗಿರುವ ಹೆಸರಘಟ್ಟ ಕೆರೆ ಮತ್ತು ಅದರ ಸುತ್ತಲಿನ ಪ್ರದೇಶವನ್ನು 'ಗ್ರೇಟರ್ ಹೆಸರುಘಟ್ಟ ಹುಲ್ಲುಗಾವಲು ಸಂರಕ್ಷಣಾ ಮೀಸಲು' ಎಂದು ಘೋಷಿಸಲಾಗಿದೆ ಎಂದು ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೩೩ ಪ್ರಭೇದದ ಪಕ್ಷಿಗಳು, ೪೦ ಸ್ಥಳೀಯ ಹಾಗೂ ನೈಸರ್ಗಿಕ ಸಸ್ಯಗಳು, ಚಿರತೆ, ತೋಳ, ಮೊದಲಾದ ವನ್ಯಜೀವಿಗಳಿಗೆ ಆಶ್ರಯತಾಣವಾದ ಈ ಕಾನನ ಮತ್ತು ಹುಲ್ಲುಗಾವಲು ಪ್ರದೇಶದ ಸಂರಕ್ಷಣೆ ತಮ್ಮ ಆದ್ಯತೆಯ ವಿಷಯವಾಗಿತ್ತು ಎಂದು ಹೇಳಿದರು. ಈ ಪ್ರದೇಶದಲ್ಲಿ ಹೆಸರಘಟ್ಟ ಕೆರೆ, ಬ್ಯಾತ ಕೆರೆ ಸೇರಿದಂತೆ ಹಲವು ಕೆರೆಗಳಿದ್ದು ವಲಸೆ ಹಕ್ಕಿಗಳ ಸಂತಾನೋತ್ಪತ್ತಿಯ ತಾಣವೂ ಆಗಿದೆ.      ಬೆಂಗಳೂರು ನಗರ ಜಿಲ್ಲೆ ಯಲಹಂಕ ಉತ್ತರ ತಾಲೂಕಿನ ಒಟ್ಟು ೫ ಸಾವಿರದ ೬೭೮ ಎಕರೆ ಪ್ರದೇಶವನ್ನು 'ಗ್ರೇಟರ್ ಹೆಸರುಘಟ್ಟ ಹುಲ್ಲುಗಾವಲು ಸಂರಕ್ಷಣಾ ಮೀಸಲು' ಎಂದು ಘೋಷಿಸಲಾಗಿದ್ದು, ಈಗ ಇಡೀ ಪ್ರದೇಶ ಸುರಕ್ಷಿತವಾಗಿರುತ್ತದೆ ಎಂದರು. 'ಗ್ರೇಟರ್ ಹೆಸರುಘಟ್ಟ ಹುಲ್ಲುಗಾವಲು ಸಂರಕ್ಷಣಾ ಮೀಸಲು' ಎಂದು ಘೋಷಣೆ ಮಾಡಿರುವುದರಿಂದ ಸ್ಥಳೀಯರಿಗೆ ಯಾವುದೇ ತೊಡಕಾಗುವುದಿಲ್ಲ. ಆದರೆ ಈ ಘೋಷಣೆ ಅತ್ಯಮೂಲ್ಯವಾದ ಭೂಮಿಯ ಒತ್ತುವರಿ ಮತ್ತು ಅಪರೂಪದ ಪಕ್ಷಿ, ಪ್ರಾಣಿಗಳ ಕಳ್ಳಬೇಟೆಯನ್ನು ನಿಯಂತ್ರಿಸುತ್ತದೆ ಎಂದು ಹೇಳಿದರು.

<><*<><>*><>

ಉಪಲೋಕಾಯುಕ್ತ, ನ್ಯಾಯಮೂರ್ತಿ ಬಿ.ವೀರಪ್ಪ ಅವರು ಇದೇ ತಿಂಗಳ ೧೨ ರಿಂದ ಮೂರು ದಿನ ಹಾವೇರಿ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಫೆಬ್ರವರಿ ೧೩ ರಂದು ಜಿಲ್ಲಾ ಗುರುಭವನದಲ್ಲಿ ಸಾರ್ವಜನಿಕರಿಂದ ಕುಂದುಕೊರತೆ ಹಾಗೂ ಅಹವಾಲು ಸ್ವೀಕರಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾಕ್ಟರ್ ವಿಜಯ ಮಹಾಂತೇಶ ದಾನಮ್ಮನವರ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ. ಜಿಲ್ಲೆಯಲ್ಲಿ ಸುಮಾರು ೨೦ ಇಲಾಖೆ ಸೇರಿದಂತೆ ಒಟ್ಟು ೧೨೪ ಪ್ರಕರಣಗಳ ಕುರಿತು ವಿಚಾರಣೆ ನಡೆಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

(ಧ್ವನಿ- ಡಾಕ್ಟರ್ ವಿಜಯ ಮಹಾಂತೇಶ ದಾನಮ್ಮನವರ)

<><*<><>*><>

ಚಿತ್ರದುರ್ಗದಲ್ಲಿ ಮಾರ್ಚ್ ೮ರಂದು ಲೋಕ್ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಸತ್ರ ನ್ಯಾಯಾಧೀಶ ವಾಸುದೇವ ರೋಣ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕ ಅದಾಲತ್‌ನಲ್ಲಿ ಚೆಕ್ ಅಮಾನ್ಯ ಪ್ರಕರಣ, ಕಾರ್ಮಿಕ ವಿವಾದ ಮತ್ತಿತರ ರಾಜಿಯಾಗಬಲ್ಲ ಪ್ರಕರಣಗಳನ್ನು ಸೂಕ್ತ ಮಾರ್ಗದರ್ಶನ ನೀಡಿ ಪರಿಹರಿಸಲಾಗುವುದು ಎಂದರು.

<><*<><>*><>

ರಸ್ತೆ ಸುರಕ್ಷತೆ ಕುರಿತು ಜಾಗೃತಿ ಹಾಗೂ ಅಪಘಾತ ಪ್ರಮಾಣವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಕೂಡಗಿ ಎನ್‌ಟಿಪಿಸಿಯಿಂದ ರಾಷ್ಟ್ರೀಯ ರಸ್ತೆ ಸುರಕ್ಷತೆ ಮಾಸಾಚರಣೆ ಆಯೋಜಿಸಲಾಗಿತ್ತು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>